ಅಧ್ಯಕ್ಷರು.—ಈಗ ತಿದ್ದುಪಡಿಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಶ್ರೀ ಆರ್. ವೆಂಕಟರಾಮಯ್ಯ.—ಮಾನ್ಯ ಅಧ್ಯಕ್ಷರೆ.....

ಅಧ್ಯಕ್ಷರು.—ಅವರು ಒಪ್ಪುವುದಿಲ್ಲ ಎಂದು ಹೇಳುತ್ತಾ ಇದ್ದಾರೆ. ಎರಡರಲ್ಲಿ ಒಂದು ವಿತ್‌ಡ್ರಾ ಮಾಡಿ, ಇಲ್ಲದೇಹೋದರೆ ಅಲೋಮಾಡಿ.

ಶ್ರೀ ಆರ್. ವೆಂಕಟರಾಮಯ್ಯ.—ಹೌದು ಎನ್ನುವುದು ಇದೆಯಲ್ಲ. ಹೌದು ಎಂದು ಹೇಳುತ್ತಾರೆ, ಬಿಲ್ ಪಾಸಾಗುತ್ತದೆ. ಇದನ್ನು ಪ್ರೊಟೆಸ್ಟ್‌ಮಾಡಿ ವಾಕೌಟ್ ಮಾಡುತ್ತೇವೆ.

(ಮಾನ್ಯ ಪಂಪಾಪತಿಯವರು ಮತ್ತು ಮಾನ್ಯ ವೆಂಕಟರಾಮಯ್ಯನವರು ಸಭಾತ್ಯಾಗ ಮಾಡಿದರು)

MR. SPEAKER.—The question is :

"That after sub-clause (a) of clause (2) the following new proviso shall be inserted-Provided further that workers will not be able to lose any of the existing facility which they enjoy regarding Holidays"

Amendment was lost

ಅಧ್ಯಕ್ಷರು.—"ಏನೇ ಖಂಡವು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ".

ಪ್ರಸ್ತಾವ ಅಂಗೀಕೃತವಾಯಿತು

(ಎರಡನೆಯ ಖಂಡವು ವಿಧೇಯಂಕದ ಅಂಗವಾಯಿತು)

ಖಂಡ 3 ರಿಂದ 4ರ ವರೆಗೆ

ಅಧ್ಯಕ್ಷರು.—"ಸಿನೇ ಮತ್ತು ಳನೇ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಸಿನೇ ಮತ್ತು ಳನೇ ಖಂಡಗಳು ವಿಧೇಯಕದ ಅಂಗವಾದವು.)

ಖಂಡ 1 ಇತ್ಯಾದಿ :

ಅಧ್ಯಕ್ಷರು.—ಪ್ರಸ್ತಾವವೇನೆಂದರೆ, ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಭಾಗವಾಗಿರುತ್ತವೆ.

ಪ್ರಸ್ತಾವವನ್ನು ಅಂಗೀಕರಿಸಲಾಯಿತು,

(ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಡಿ. ಮುಂಜುನಾಥ್ (ಕಾರ್ಮಿಕ ಮಂತ್ರಿಗಳು).—ಮಾನ್ಯ ಅಧ್ಯಕ್ಷರೆ, ೧೯೮೬ನೇ ಇಸವಿಯ ಕರ್ನಾಟಕ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜಾ ದಿನಗಳು) (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, "೧೯೮೬ನೇ ಇಸವಿಯ ಕರ್ನಾಟಕ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜಾದಿನಗಳು) (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು